ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೊಂದನೆಯ ಅಧಿವೇಶನ
ಬುಧವಾರ, ದಿನಾಂಕ : 23 ನೇ ಸೆಪ್ಟೆಂಬರ್, 2020

ಮೈಸೂರು-ಕುಶಾಲನಗರ ಚತುಷ್ಪಥ ರಸ್ತೆಯ ನಿರ್ಮಾಣ

ಶ್ರೀಎಸ್.ನಾಗರಾಜ್(ಸಂದೇಶನಾಗರಾಜ್) (ಸ್ಥಳೀಯಸಂಸ್ಥೆಗಳಕ್ಷೇತ್ರ) :-

414 (352) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮೈಸೂರು-ಕುಶಾಲನಗರ ರಸ್ತೆಯನ್ನು ಚತುಷ್ಪಥ ರಸ್ತೆಯನ್ನಾಗಿ ಅಭಿವೃದ್ಧಿಪಡಿಸಲು ಸರ್ಕಾರ ಕ್ರಮ ತೆಗೆದುಕೊಳ್ಳಲಾಗಿದೆಯೇ ; ಈ ಬಗ್ಗೆ ಸರ್ವೇ ಕಾರ್ಯ ಪೂರ್ಣಗೊಂಡಿದೆಯೇ ; ಈ ಯೋಜನೆಯ ಅಂದಾಜು ವೆಚ್ಚ ಎಷ್ಟು ; ಕಾಮಗಾರಿಗಳನ್ನು ಯಾವಾಗ ಪ್ರಾರಂಭಿಸಲಾಗುವುದು ;

(ಆ) ಹುಣಸೂರು ನಗರದ ಮಧ್ಯೆ ಹಾದು ಹೋಗುವ ಈ ಹೆದ್ದಾರಿಯು ಹುಣಸೂರು ನಗರ ವ್ಯಾಪ್ತಿಯಲ್ಲಿ ದುಸ್ಥಿತಿಯಲ್ಲಿದ್ದು, ಈ ರಸ್ತೆಯ ದುರಸ್ಥಿ ಮತ್ತು ಅಭಿವೃದ್ಧಿಗೆ ತೆಗೆದುಕೊಳ್ಳಲಾದ ಕ್ರಮಗಳೇನು ?